ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೧	ಬೆಂಗಳೂರು, ಮಂಗಳವಾರ, ೦೪, ಆಗಸ್ಟ್, ೨೦೨೬ (ಶ್ರಾವಣ, ೧೩, ಶಕವರ್ಷ, ೧೯೪೮)	ಸಂಚಿಕೆ ೧೫೨
Volume - 161	BENGALURU, TUESDAY, 04, AUGUST, 2026 (SHRAVANA , 13, SHAKAVARSHA, 1948)	Issue 152

ಭಾಗ ೫

ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 266 ಡಿಸಿಇ 2025(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ. ಬಿ ಆರ್ ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:27-07-2026.

ಅಧಿಸೂಚನೆ

ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗೆ ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸರ್ಕಾರಕ್ಕೆ ಸಲ್ಲಿಸಿದ ಅಂತಿಮ ಆಯ್ಕೆ ಪಟ್ಟಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 92 ಡಿಸಿಇ 2023(ಇ), ದಿನಾಂಕ:03.11.2023ರಲ್ಲಿ ಪ್ರಕಟಿಸಲಾಗಿತ್ತು.

ಸದರಿ ಅಧಿಸೂಚನೆಯಲ್ಲಿನ ಎಲೆಕ್ಟ್ರಾನಿಕ್ಸ್ ವಿಷಯದ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಉಳಿಕೆ ಮೂಲ ವೃಂದದಲ್ಲಿ(NHK) ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿನ ಎಸ್.ಎಲ್.ಪಿ ಸಂಖ್ಯೆ:12602/2025ರ ಅಂತಿಮ ಆದೇಶದ ಷರತ್ತಿಗೊಳಪಟ್ಟು ಪರಿಷ್ಕೃತ ಆಯ್ಕೆ ಪಟ್ಟಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 266 ಡಿಸಿಇ 2025(ಇ), ದಿನಾಂಕ:19.11.2025ರಲ್ಲಿ ಪ್ರಕಟಿಸಲಾಗಿದೆ. ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಸಹಾಯಕ ಪ್ರಾಧ್ಯಾಪಕರ ನೇಮಕಾತಿ) (ವಿಶೇಷ) ನಿಯಮಗಳು, 2020 ನಿಯಮ 9ರ ಉಪ ನಿಯಮ(2) ಮತ್ತು (3)ರನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಅರ್ಹತೆಯ ದೃಢೀಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ವಿಚಾರಣೆಗಳು ಪೂರ್ಣಗೊಂಡಿರುವ ಈ ಕೆಳಕಂಡ ಅಭ್ಯರ್ಥಿಗಳನ್ನು ವೇತನ ಶ್ರೇಣಿ ರೂ.57700-182400(ಯುಜಿಸಿ ವೇತನ ಶ್ರೇಣಿ)ರ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇಮಿಸಿ ಆದೇಶಿಸಿದೆ.

ವಿಷಯ: ELE-Electronics
ಹುದ್ದೆ: Regular
ವರ್ಗ: NON-HK (ಸಾಮಾನ್ಯ ಮಿಕ್ಕುಳಿದ ವರ್ಗ)

Sl. No.	Sl. No. of Govt. Notification no: ED 266 DCE 2025, Dated: 19.11.2025.	NAME	DOB	SELECTED CATEGORY
1	01	MAHANTESH SUBHASH HINGLAJE	06-FEB-90	GMR
2	02	ZUBER AHMED PUNEKAR	25-Sep-85	GMK
3	04	ANITHA K T	29-Apr-83	SCW

ಈ ಅಧಿಸೂಚನೆಯ ಪ್ರತಿಯನ್ನು ಮೇಲೆ ನಮೂದಿಸಿರುವ ಅಭ್ಯರ್ಥಿಗಳ ಖಾಯಂ ವಿಳಾಸಕ್ಕೆ ಪ್ರತ್ಯೇಕವಾಗಿ ನೋಂದಣಿ ಅಂಚೆಯ ಮೂಲಕ ರವಾನಿಸಲು ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರು ಕ್ರಮವಹಿಸುವುದು.

ಸದರಿ ಹುದ್ದೆಗೆ ನೇಮಕಗೊಂಡ ಅಭ್ಯರ್ಥಿಗಳು ಈ ಆದೇಶ ತಲುಪಿದ 15 (ಹದಿನೈದು) ದಿನಗಳೊಳಗೆ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ, ಬೆಂಗಳೂರು ಇವರಲ್ಲಿ **ತೆರಳಿ, ಕೌನ್ಸಿಲಿಂಗ್ ಪ್ರಕ್ರಿಯೆ ನಡೆಸಿ, ಸ್ಥಳ ನಿಯುಕ್ತಿಗೊಳಿಸುವಂತೆ ಮನವಿ ಸಲ್ಲಿಸುವುದು.** ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರು ನಿಯಮಾನುಸಾರ ಜೇಷ್ಠತೆಯ ಆಧಾರದ ಮೇಲೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಿ ಅಭ್ಯರ್ಥಿಗೆ ಸ್ಥಳನಿಯುಕ್ತಿ ಆದೇಶವನ್ನು ನೀಡುವುದು. ಅಭ್ಯರ್ಥಿಗಳು ಸ್ಥಳ ನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ವೇತನ ಹಾಗೂ ಇತರ ಭತ್ಯೆಗಳನ್ನು ಪಡೆಯಲು ಅರ್ಹರಿರುತ್ತಾರೆ.

ಸರ್ಕಾರದ ಪೂರ್ವಾನುಮತಿ ಪಡೆಯದೆ ನಿಗಧಿತ ಅವಧಿಯೊಳಗೆ ವರದಿ ಮಾಡಿಕೊಳ್ಳಲು ವಿಫಲರಾಗುವ ಅಭ್ಯರ್ಥಿಯ ನೇಮಕಾತಿ ಆದೇಶವು ತಾನಾಗಿಯೇ ಅನೂರ್ಜಿತವಾಗುತ್ತದೆ.

ಷರತ್ತುಗಳು:

1. ಇದು ಸ್ಪರ್ಧಾತ್ಮಕ ಪರೀಕ್ಷೆಯ ಆಧಾರದ ಮೇಲೆ ಮಾಡಿರುವ ನೇರ ನೇಮಕಾತಿಯಾಗಿರುವುದರಿಂದ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಸಹಾಯಕ ಪ್ರಾಧ್ಯಾಪಕರ ನೇಮಕಾತಿ) (ವಿಶೇಷ) ನಿಯಮಗಳು, 2020 ರನ್ವಯ ಹಾಗೂ ಕರ್ನಾಟಕ ನಾಗರಿಕ ಸೇವಾ (ಜ್ಯೇಷ್ಠತೆ) ನಿಯಮಗಳು, 1957ರ ನಿಯಮ(5)ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 266 ಡಿಸಿಇ 2025(ಇ), ದಿನಾಂಕ:19.11.2025ರಲ್ಲಿ ಪ್ರಕಟಿಸಿರುವ ಪರಿಷ್ಕೃತ ಆಯ್ಕೆ ಪಟ್ಟಿಯಲ್ಲಿನ ಜೇಷ್ಠತೆಯು ಅಂತಿಮವಾಗಿರುತ್ತದೆ.
2. ದಿನಾಂಕ:19.11.2025ರಂದು ಪ್ರಕಟಿಸಿರುವ ಪರಿಷ್ಕೃತ ಆಯ್ಕೆ ಪಟ್ಟಿಯಲ್ಲಿನ ಇನ್ನುಳಿದ ಅರ್ಹ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಅಗತ್ಯ ವಿಚಾರಣೆಗಳು ತೃಪ್ತಿಕರವಾಗಿ ಪೂರ್ಣಗೊಂಡ ನಂತರ ಪ್ರತ್ಯೇಕ ನೇಮಕಾತಿ ಆದೇಶ ಹೊರಡಿಸಲಾಗುವುದು. ಅಂತಹ ಅಭ್ಯರ್ಥಿಗಳ ಅರ್ಹತೆ/ಜೇಷ್ಠತೆಗೆ ಯಾವುದೇ ಬಾಧೆಯಾಗುವುದಿಲ್ಲ. ಯಾವುದೇ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ ದಿನಾಂಕವನ್ನಾಧರಿಸಿ ಜೇಷ್ಠತೆಯನ್ನು ಕ್ಲೇಮು ಮಾಡುವ ಹಕ್ಕುಳ್ಳವನಾಗಿರುವುದಿಲ್ಲ.

3. ನೇಮಕಗೊಂಡ ಅಭ್ಯರ್ಥಿಗಳು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನ ಪ್ರಾಂಶುಪಾಲರ ಸಮಕ್ಷಮದಲ್ಲಿ ಕಾರ್ಯವರದಿ ಮಾಡಿಕೊಳ್ಳುವ ಸಮಯದಲ್ಲಿ ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಮೂಲ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು.

4. ಈ ನೇಮಕಾತಿಯು ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಪರೀಕ್ಷಾರ್ಥ ಅವಧಿಯನ್ನು ಅಭ್ಯರ್ಥಿಯು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ.
5. ಅಭ್ಯರ್ಥಿಯು ಪರೀಕ್ಷಾರ್ಥ ಅವಧಿಯಲ್ಲಿ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗತಕ್ಕದ್ದು.
6. ನೇಮಕಾತಿಗೊಂಡ ಅಭ್ಯರ್ಥಿಗಳು ಕರ್ನಾಟಕ ಸಿವಿಲ್ ಸೇವೆಗಳು (ಕಂಪ್ಯೂಟರ್ ಸಾಕ್ಷಾರತಾ ಪರೀಕ್ಷೆ) ನಿಯಮಗಳು, 2012 ರನ್ವಯ ಹಾಗೂ ಸದರಿ ನಿಯಮಗಳಿಗೆ ಸರ್ಕಾರವು ಕಾಲ ಕಾಲಕ್ಕೆ ಹೊರಡಿಸಿರುವ/ಹೊರಡಿಸುವ ನಿಯಮಗಳನ್ವಯ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದು ಕಡ್ಡಾಯವಾಗಿರುತ್ತದೆ.
7. ನೇಮಕಗೊಂಡ ಅಭ್ಯರ್ಥಿಗಳಿಗಾಗಿ ಕೈಗೊಳ್ಳಲಾಗುವ ಫೌಂಡೇಶನ್ ಕೋರ್ಸ್‌ಗೆ (ಬುನಾದಿ ತರಬೇತಿ) ಹಾಜರಾಗುವುದು ಕಡ್ಡಾಯವಾಗಿರುತ್ತದೆ.
8. ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅವಶ್ಯಕತೆ ಇರುವ ಓರಿಯಂಟೇಷನ್ ಮತ್ತು ರೆಫ್ರೆಶರ್ ಕೋರ್ಸ್ ತರಬೇತಿಯನ್ನು ಪೂರೈಸತಕ್ಕದ್ದು.
9. ಅಭ್ಯರ್ಥಿಯು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ನಿಯಮಾನುಸಾರ ವೇತನ, ಭತ್ಯೆ ಇತ್ಯಾದಿ ಪಡೆಯಲು ಅರ್ಹರಿರುತ್ತಾರೆ.
10. ಅಭ್ಯರ್ಥಿಗಳು ಕಾರ್ಯವರದಿ ಮಾಡಿಕೊಳ್ಳಲು ಹಾಗೂ ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾಗಲು ಯಾವುದೇ ಭತ್ಯೆಗಳನ್ನು ಪಡೆಯಲು ಅರ್ಹರಿರುವುದಿಲ್ಲ.
11. ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ (ಎಸ್.ಪಿ.ಎಲ್) 04 ಪಿಇಟಿ 2005, ದಿನಾಂಕ: 31.03.2006ರಲ್ಲಿನ ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಅನ್ವಯವಾಗುತ್ತದೆ.
12. ಈಗಾಗಲೇ ಸರ್ಕಾರಿ ಸೇವೆಯಲ್ಲಿರುವ ಸಿಬ್ಬಂದಿಗಳು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 252(ಬಿ) ರನ್ವಯ ಸೇವೆಯಿಂದ ಬಿಡುಗಡೆ ಹೊಂದಿ, ಸ್ಥಳ ನಿಯುಕ್ತಿಗೊಳಿಸಲಾದ ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ಈ ಬಗ್ಗೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ದೃಢೀಕರಿಸತಕ್ಕದ್ದು.
13. ಅಭ್ಯರ್ಥಿಗಳು ನೀಡಿರುವ/ನೀಡುವ ಯಾವುದೇ ಮಾಹಿತಿ/ದಾಖಲಾತಿಗಳು ಯಾವುದೇ ಸಮಯದಲ್ಲಿ ತಪ್ಪು/ನಕಲಿ ಎಂದು ಕಂಡುಬಂದಲ್ಲಿ ಕರ್ನಾಟಕ ನಾಗರಿಕ ಸೇವಾ(ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 20 ರನ್ವಯ ಅಂತಹವರನ್ನು ಯಾವುದೇ ಮುನ್ಸೂಚನೆ ನೀಡದೇ ನೇಮಕಾತಿ ಆದೇಶವನ್ನು ರದ್ದುಪಡಿಸಿ, ತಕ್ಷಣದಿಂದಲೇ ಸೇವೆಯಿಂದ ತೆಗೆದು ಹಾಕಲು ಕ್ರಮ ಕೈಗೊಳ್ಳಲಾಗುವುದು.
14. ಪರೀಕ್ಷಾರ್ಥ ಅವಧಿಯಲ್ಲಿ ಯಾವುದೇ ವರ್ಗಾವಣೆಗೆ ಅವಕಾಶವಿರುವುದಿಲ್ಲ.
15. ನೇಮಕಾತಿ ಆದೇಶವನ್ನು ಪಡೆಯುವ ಸಂದರ್ಭದಲ್ಲಿ ಅಭ್ಯರ್ಥಿಯು ತಾನು ಒದಗಿಸಿರುವ ಎಲ್ಲಾ ಮಾಹಿತಿಯು ಸತ್ಯವೆಂದು ದೃಢೀಕರಣ ಪತ್ರ ಸಲ್ಲಿಸುವುದು.
16. ಒಬ್ಬರಿಗಿಂತ ಹೆಚ್ಚು ಪತ್ನಿ/ಪತಿಯೂ ಹೊಂದಿರುವುದಿಲ್ಲವೆಂದು ಅಭ್ಯರ್ಥಿಯಿಂದ ಮುಚ್ಚಳಿಕೆ ಪತ್ರ ಪಡೆಯುವುದು.

17. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ವಿದ್ಯಾರ್ಹತೆಯ ಬಗ್ಗೆ ಎಲ್ಲಾ ದಾಖಲಾತಿಗಳನ್ನು (SSLC/PUC/ಪದವಿ/ಸ್ನಾತಕೋತ್ತರ/ಬಿ.ಎಡ್/NET/SLET) ಹಾಗೂ ಜನ್ಮ ದಿನಾಂಕ ದೃಢೀಕರಿಸುವ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.
18. ಅಭ್ಯರ್ಥಿಗಳು ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ನಿಯಮಗಳು/ಮಾರ್ಗಸೂಚಿಗಳಿಗೆ/ಕೆ.ಸಿ.ಎಸ್.ಆರ್. ನಿಯಮಗಳಿಗೆ ಹಾಗೂ ಚಾಲ್ತಿಯಲ್ಲಿರುವ ಇತರೆ ಎಲ್ಲಾ ಸೇವಾ ನಿಯಮಗಳಿಗೆ ಬದ್ಧರಾಗಿರತಕ್ಕದ್ದು.
19. ಅಭ್ಯರ್ಥಿಯು ಭಾರತದ ಸಂವಿಧಾನದ ರೀತ್ಯಾ ನಿಷ್ಠೆಯ ಪ್ರಮಾಣ ವಚನ ಸ್ವೀಕರಿಸತಕ್ಕದ್ದು.
20. ಈ ನೇಮಕಾತಿ ಆದೇಶವು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ರಿಟ್ ಅರ್ಜಿಗಳ ಸಂಖ್ಯೆ:2034 / 2024, 1633 / 2024, 1900 / 2024, 1464 / 2024, 3455 / 2024, 5191/2024, 24247/2024 ರ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ ಹಾಗೂ ಸದರಿ ನೇಮಕಾತಿ ಅಧಿಸೂಚನೆಯ ಕುರಿತಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಎಲ್ಲಾ ಪೀಠಗಳಲ್ಲಿ ಹಾಗೂ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಎಲ್ಲಾ ಪೀಠಗಳಲ್ಲಿ ದಾಖಲಾಗಿರುವ ರಿಟ್ ಅರ್ಜಿ/ಅರ್ಜಿಗಳಲ್ಲಿ ಮಾನ್ಯ ನ್ಯಾಯಾಲಯಗಳು ನೀಡುವ ಅಂತಿಮ ತೀರ್ಪಿನ ಷರತ್ತಿಗೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಬೀನ್ ತಾಜ್ ಜಿ. ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ಕಾಲೇಜು ಶಿಕ್ಷ ಣ & ಸಮನ್ವಯ)

PR-55

ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಸಂಖ್ಯೆ: ಜಿನಕೋ/ಸಿ(1)/ಪೌ.ನೇ/ಸಿ.ಆರ್/06/2026-27 ದಿನಾಂಕ: 22/07/2026

–: <u>ಅಧಿಸೂಚನೆ</u> :–

ವಿಷಯ: ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರಸಭೆಗಳಿಗೆ ಹಂಚಿಕೆಯಾಗಿರುವ ಸಂಖ್ಯಾರಿಕ್ತ 10 ಪೌರಕಾರ್ಮಿಕರ ಹುದ್ದೆಗಳಿಗೆ ನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂ: ನಅಇ 176 ಜಿಎಲ್ 2022 (ಭಾ-2)(ಇ) ದಿನಾಂಕ: 09.03.2023
2. ಸರ್ಕಾರದ ಆದೇಶ ಸಂ: ನಅಇ 176 ಜಿಎಲ್ 2022 (ಭಾ-2)(ಇ) ದಿನಾಂಕ: 29.03.2023
3. ಮಾನ್ಯ ಪೌರಾಡಳಿತ ನಿರ್ದೇಶನಾಲಯದ ಪತ್ರದ ಸಂಖ್ಯೆ 155436/DAM/EST2/GRPD/54/2025 ದಿನಾಂಕ 13/01/2026.
4. ಮಾನ್ಯ ಸರ್ಕಾರದ ಆದೇಶ ಪತ್ರದ ಸಂಖ್ಯೆ ಸಿಆಸುಇ 02 ಸೆಹಿಮ 2026 ಬೆಂಗಳೂರು, ದಿನಾಂಕ 13/05/2026.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಸರ್ಕಾರದ ಆದೇಶದಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರಸಭೆಗಳಿಗೆ ಹಂಚಿಕೆಯಾಗಿರುವ 10 ಸಂಖ್ಯಾರಿಕ್ತ ಪೌರಕಾರ್ಮಿಕರ ಹುದ್ದೆಗಳಿಗೆ ವಿಶೇಷ ನೇರ

ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖಿತ (1), (2), (3) ಮತ್ತು (4) ರನ್ವಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪೌರಕಾರ್ಮಿಕರಾಗಿ ನೇರ ಪಾವತಿ/ಕ್ಷೇಮಾಭಿವೃದ್ಧಿ/ದಿನಗೂಲಿ ಆಧಾರದಲ್ಲಿ 2 ವರ್ಷಕ್ಕಿಂತ ಕಡಿಮೆ ಇಲ್ಲದೇ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಅರ್ಜಿ ಸಲ್ಲಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿಯೇ ಕಾರ್ಯನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳಿಂದ ಮಾತ್ರ ಸದರಿ ಪೌರಕಾರ್ಮಿಕರ ನೇಮಕಾತಿ ನಿಯಮಾವಳಿಗಳಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.
2. ಅಭ್ಯರ್ಥಿಗಳು ಅರ್ಜಿ ನಮೂನೆಯಲ್ಲಿ ತಿಳಿಸಿರುವ ಎಲ್ಲಾ ಮಾಹಿತಿಗಳನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು ಹಾಗೂ ಅದಕ್ಕೆ ಪೂರಕವಾದ ದಾಖಲೆಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸಿ ನಿಗಧಿತ ಅವಧಿಯೊಳಗೆ ಸಂಬಂಧಿಸಿದ ನಗರಸಭೆಗಳ ಪೌರಾಯುಕ್ತರ ಕಛೇರಿಯಲ್ಲಿ ಸಲ್ಲಿಸತಕ್ಕದ್ದು.
3. ಉಲ್ಲೇಖ (1) ಮತ್ತು (4) ರ ಸರ್ಕಾರದ ಅಧಿಸೂಚನೆಯಲ್ಲಿ ನಿಗಧಿಪಡಿಸಿರುವ ಷರತ್ತು ಮತ್ತು ಮಾನದಂಡಗಳಂತೆ ಆಯ್ಕೆ ಪ್ರಕ್ರಿಯೆಯನ್ನು ಜರುಗಿಸಲಾಗುವುದು.
4. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕಾಲಮಿತಿ ಹಾಗೂ ವಿಳಾಸ.

ವಿವರ	ದಿನಾಂಕಃ	ಅರ್ಜಿ ನಮೂನೆ /ಪಡೆಯುವ ವಿಳಾಸ
ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಪ್ರಾರಂಭಿಕ ದಿನಾಂಕ	22/07/2026	ಮೇಲ್ಕಂಡಂತೆ ಅರ್ಹರು /ಆಸಕ್ತರು ತಾವು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆ ದೊಡ್ಡಬಳ್ಳಾಪುರ, ಹೊಸಕೋಟೆ ಮತ್ತು ನೆಲಮಂಗಲಗಳ ಪೌರಾಯುಕ್ತರ ಕಛೇರಿಯಲ್ಲಿ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ನಗರ ಸ್ಥಳೀಯ ಸಂಸ್ಥೆಗಳಿಗೆ ನಿಗಧಿತ ಅವಧಿಯಲ್ಲಿ ಸಲ್ಲಿಸುವುದು.
ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ	24/08/2026	
ಅರ್ಜಿಗಳನ್ನು ಪೌರಾಯುಕ್ತರು ಪರಿಶೀಲಿಸಿ ಪೂರಕದಾಖಲೆಗಳೊಂದಿಗೆ ಜಿಲ್ಲಾ ನಗರಾಭಿವೃದ್ಧಿ ಕೋಶಕ್ಕೆ ಸಲ್ಲಿಸಲು ಕೊನೆಯ ದಿನಾಂಕ	31/08/2026	

5. ಸಂಖ್ಯಾರಿಕ್ತ ಪೌರಕಾರ್ಮಿಕರ ನೇಮಕಾತಿ ಹುದ್ದೆಗಳಿಗೆ ನಿಗಧಿಪಡಿಸಲಾದ ಮಾನದಂಡಗಳು ಹಾಗೂ ಕನಿಷ್ಠ ವಿದ್ಯಾರ್ಹತೆ.

ನಗರ ಸ್ಥಳೀಯ ಸಂಸ್ಥೆ ಹೆಸರು	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಭರ್ತಿ ಮಾಡಬೇಕಾದ ಹುದ್ದೆಗಳ ಸಂಖ್ಯೆ	ಕನಿಷ್ಠ ವಿದ್ಯಾರ್ಹತೆ/ಅರ್ಹತೆ
ನಗರಸಭೆ ದೊಡ್ಡಬಳ್ಳಾಪುರ	ಪೌರ ಕಾರ್ಮಿಕರ ಹುದ್ದೆಯ ವೇತನ ಶ್ರೇಣಿ ರೂ: 27000–46675	03	1) ಕನ್ನಡ ಭಾಷೆ ಮಾತನಾಡಲು ಗೊತ್ತಿರಬೇಕು. 2) ನಗರಸಭೆಗಳಲ್ಲಿ ಪೌರಕಾರ್ಮಿಕರಾಗಿ ನೇರ ಪಾವತಿ/ಕ್ಷೇಮಾಭಿವೃದ್ಧಿ/ದಿನಗೂಲಿ ಆಧಾರದಲ್ಲಿ 2 ವರ್ಷಕ್ಕಿಂತ ಕಡಿಮೆ ಇಲ್ಲದೇ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರಸಭೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ
ನಗರಸಭೆ ಹೊಸಕೋಟೆ		03	

ನಗರಸಭೆ ನೆಲಮಂಗಲ		04	ಅರ್ಹ ಅಭ್ಯರ್ಥಿಗಳಿಂದ ಮಾತ್ರ ಸದರಿ ಸಂಖ್ಯಾರಿಕ್ತ ಪೌರಕಾರ್ಮಿಕರ ನೇಮಕಾತಿ ನಿಯಮಾವಳಿಗಳಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.
ಒಟ್ಟು		10	

1) ಹುದ್ದೆಗಳ ವರ್ಗೀಕರಣ :–

1) ದೊಡ್ಡಬಳ್ಳಾಪುರ ನಗರಸಭೆಯಲ್ಲಿ ಸಂಖ್ಯಾರಿಕ್ತ 03 ಪೌರಕಾರ್ಮಿಕ ಹುದ್ದೆಗಳ ವಿವರ.
ರೋಷ್ಟರ್ ಬಿಂದು ವರ್ಗೀಕರಣ ಪಟ್ಟಿ

ಮೀಸಲಾತಿ	ಇ	ಮ.ಅ	ಗ್ರಾ.ಅ	ಮಾ.ಸೈ	ಕಮಾಅ	ಯೋ.ನಿ.ಅ	ಅಂ.ವಿ	ತೃಲಿ	ಒಟ್ಟು
ಪ.ಜಾ	0	0	1	0	0	0	0	0	1
ಸಾ.ಅ	0	1	1	0	0	0	0	0	2
ಪ.ಪಂ	0	0	0	0	0	0	0	0	0
ಪ್ರ–1	0	0	0	0	0	0	0	0	0
ಪ್ರ–2ಎ	0	0	0	0	0	0	0	0	0
ಪ್ರ–2ಬಿ	0	0	0	0	0	0	0	0	0
ಪ್ರ–3ಎ	0	0	0	0	0	0	0	0	0
ಪ್ರ–3ಬಿ	0	0	0	0	0	0	0	0	0
ಒಟ್ಟು	0	1	2	0	0	0	0	0	3

2) ಹೊಸಕೋಟೆ ನಗರಸಭೆಯಲ್ಲಿ ಸಂಖ್ಯಾರಿಕ್ತ 03 ಪೌರಕಾರ್ಮಿಕ ಹುದ್ದೆಗಳ ವಿವರ.
ರೋಷ್ಟರ್ ಬಿಂದು ವರ್ಗೀಕರಣ ಪಟ್ಟಿ

ಮೀಸಲಾತಿ	ಇ	ಮ.ಅ	ಗ್ರಾ.ಅ	ಮಾ.ಸೈ	ಕಮಾಅ	ಯೋ.ಅ	ಅಂ.ವಿ	ತೃಲಿ	ಒಟ್ಟು
ಪ.ಜಾ	0	0	0	0	0	0	0	0	0
ಸಾ.ಅ	0	1	0	0	0	1	0	0	2
ಪ.ಪಂ	0	0	0	0	0	0	0	0	0
ಪ್ರ–1	0	0	0	0	0	0	0	0	0
ಪ್ರ–2ಎ	0	0	1	0	0	0	0	0	1
ಪ್ರ–2ಬಿ	0	0	0	0	0	0	0	0	0
ಪ್ರ–3ಎ	0	0	0	0	0	0	0	0	0
ಪ್ರ–3ಬಿ	0	0	0	0	0	0	0	0	0
ಒಟ್ಟು	0	1	1	0	0	1	0	0	3

3) ನೆಲಮಂಗಲ ನಗರಸಭೆಯಲ್ಲಿ ಸಂಖ್ಯಾರಿಕ್ತ 04 ಪೌರಕಾರ್ಮಿಕ ಹುದ್ದೆಗಳ ವಿವರ.
ರೋಷ್ಟರ್ ಬಿಂದು ವರ್ಗೀಕರಣ ಪಟ್ಟಿ

ಮೀಸಲಾತಿ	ಇ	ಮ.ಅ	ಗ್ರಾ.ಅ	ಮಾ.ಸೈ	ಕಮಾಅ	ಯೋ.ನಿ.ಅ	ಅಂ.ವಿ	ತೃಲಿ	ಒಟ್ಟು
ಪ.ಜಾ	0	1	0	0	0	0	0	0	1
ಸಾ.ಅ	0	0	1	0	0	0	1	0	2
ಪ.ಪಂ	0	0	0	0	0	0	0	0	0
ಪ್ರ–1	0	0	0	0	0	0	0	0	0

ಪ್ರ–2ಎ	1	0	0	0	0	0	0	0	1
ಪ್ರ–2ಬಿ	0	0	0	0	0	0	0	0	0
ಪ್ರ–3ಎ	0	0	0	0	0	0	0	0	0
ಪ್ರ–3ಬಿ	0	0	0	0	0	0	0	0	0
ಒಟ್ಟು	1	1	1	0	0	0	1	0	4

ನೇಮಕಾತಿ ವಿಧಾನ:–

1	ಅಭ್ಯರ್ಥಿಗಳ ಆಯ್ಕೆಯನ್ನು ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರ ನೇಮಕಾತಿಗೆ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳಿಗೆ ಕರ್ನಾಟಕ ಪುರಸಭೆಗಳ ಕಾಯ್ದೆ 1964 ಕಲಂ 323 ರಲ್ಲಿನ (ಕರ್ನಾಟಕ ಕಾಯ್ದೆ ಸಂಖ್ಯೆ 1964ರ ಸಂಖ್ಯೆ 22 ರೀತ್ಯಾ) ನೇರ ನೇಮಕಾತಿ (ವಿಶೇಷ) ನಿಯಮಗಳು 2022 ರ ಪ್ರಕಾರ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.
2	ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ನಗರಸಭೆಗಳಲ್ಲಿ ಹಾಲಿ ನೇರ ಪಾವತಿ/ಕ್ಷೇಮಾಭಿವೃದ್ಧಿ/ದಿನಗೂಲಿ ಆದಾರದಲ್ಲಿ 2 ವರ್ಷಕ್ಕಿಂತ ಕಡಿಮೆ ಇಲ್ಲದೇ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಆದ್ಯತೆ ಅನ್ಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕರ್ತವ್ಯ ನಿರತ ಅಭ್ಯರ್ಥಿಗಳ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ ಮತ್ತು ಅಂಚೆ ಮೂಲಕ ಸ್ವೀಕೃತಿಯಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
3	ಕಡಿಮೆ ವರ್ಷ ಸೇವೆ ಸಲ್ಲಿಸಿರುವುದಕ್ಕಿಂತ ಹೆಚ್ಚು ವರ್ಷ ಸೇವೆ ಸಲ್ಲಿಸಿದವರನ್ನು ಪರಿಗಣಿಸಲಾಗುವುದು. ನೇಮಕಾತಿಯಲ್ಲಿ ಆದ್ಯತೆಯನ್ನು ನೇರ ಪಾವತಿ/ಕ್ಷೇಮಾಭಿವೃದ್ಧಿ/ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ಅನುಕ್ರಮವಾಗಿ ಪರಿಗಣಿಸಲಾಗುವುದು.
4	ಪೌರಕಾರ್ಮಿಕರಿಗೆ 2 ವರ್ಷಗಳ ಮೇಲ್ಪಟ್ಟು ನಗರಸಭೆಗಳಿಂದ ವೇತನ ಪಡೆದ ದಾಖಲಾತಿಗಳನ್ನು ಹಾಗೂ ಹೊರಗುತ್ತಿಗೆ ನೌಕರರಿಗೆ ಸಂಬಂಧಿಸಿದಂತೆ ಏಜೆನ್ಸಿಯಿಂದ ಪಾವತಿಸುವ ವೇತನ ಪಿ.ಎಫ್, ಇ.ಎಸ್.ಐ ದಾಖಲಾತಿಯನ್ನು ನೇಮಕಾತಿಯಲ್ಲಿ ಆದ್ಯತೆಗೆ ಪರಿಗಣಿಸಲಾಗುವುದು.
5	ಎರಡು ಮತ್ತು ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳು ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ
6	ಅರ್ಜಿ ಸಲ್ಲಿಸುವ ವೇಳೆ ಅರ್ಜಿದಾರರ ವಯಸ್ಸು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮಗಳು ಅಥವಾ ಕರ್ನಾಟಕ ಪುರಸಭೆ (ಅಧಿಕಾರಿ/ನೌಕರರ ನೇಮಕಾತಿ) ನಿಯಮಗಳು 2010 ನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ ಸದರಿ ಅಧಿಸೂಚನೆ ಜಾರಿಗೆ ಬಂದ ದಿನಾಂಕದಿಂದ ಗರಿಷ್ಟ ವಯೋಮಿತಿ 55 ವರ್ಷ ಮೀರಬಾರದು.
7	ಅಭ್ಯರ್ಥಿಯ ವಯಸ್ಸನ್ನು ಶೈಕ್ಷಣಿಕ ವಿದ್ಯಾರ್ಹತೆ, ದಾಖಲಾತಿಗಳು/ಆಧಾರ ಕಾರ್ಡ್/ಪಡಿತರ ಚೀಟಿ/ಮತದಾರರ ಗುರುತಿನ ಚೀಟಿ (EPIC) ದಾಖಲಾತಿಗಳನ್ನು ಆಧರಿಸಿ ನಿರ್ಧರಿಸಲಾಗುವುದು.
8	ಉಪ ನಿಯಮ (2) ರಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳು ನಿಗಧಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಸದರಿ ಅಭ್ಯರ್ಥಿಗೆ ಬದಲಾಗಿ ಅದೇ ಪ್ರವರ್ಗದ ಮೀಸಲಾತಿಯಲ್ಲಿ ಹೆಚ್ಚುವರಿ ಪಟ್ಟಿಯಲ್ಲಿ ಅಭ್ಯರ್ಥಿಯಾಗಿರುವ ಮತೊಬ್ಬ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು.
9	ಉಪನಿಯಮ (2) ಮತ್ತು (5) ರಂತೆ ತಯಾರಿಸಲಾದ ಆಯ್ಕೆ ಪಟ್ಟಿಯನ್ನು ಆಯಾ ನಗರಸಭೆಗಳಲ್ಲಿ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು, ಆಯ್ಕೆಯಾದ ಅಭ್ಯರ್ಥಿಗಳಿಗೆ ತಿಳಿಸಿ ಮತ್ತು ಆಯ್ಕೆ ಪಟ್ಟಿಯನ್ನು ಆಯಾ ನಗರಸಭೆಯ ವೆಬ್‌ಸೈಟಿನಲ್ಲಿ ಪ್ರಚುರ ಪಡಿಸಲಾಗುವುದು.
10	ನಿಯಮ 4ರ ಉಪನಿಯಮ 6 ರಲ್ಲಿ ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದ ಮಾತ್ರಕ್ಕೆ ಅವರ ನೇಮಕಾತಿ ಹಕ್ಕು ಎಂದು ಪರಿಭಾವಿಸತಕ್ಕದ್ದಲ್ಲ. ಆಯ್ಕೆಯಾಗುವ ಅಭ್ಯರ್ಥಿಗಳು ದಾಖಲಾತಿ ಪರಿಶೀಲನೆಗೆ ಕರೆದಾಗ ಜಿಲ್ಲಾಕಾರಿಗಳ ಕಛೇರಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.
11	ಅಭ್ಯರ್ಥಿಯು ಸಲ್ಲಿಸಿರುವ ದಾಖಲೆಗಳು ತಪ್ಪು ಅಥವಾ ಸುಳ್ಳು ಎಂದು ಕಂಡುಬಂದಲ್ಲಿ ನೇಮಕಾತಿ ಆದೇಶ ರದ್ದು ಪಡುವುದಲ್ಲದೇ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
12	ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದು ಪಡಿಸುವ ಅಥವಾ ಹೆಚ್ಚುವರಿ ಷರತ್ತುಗಳನ್ನು ವಿಧಿಸುವ ಬಗ್ಗೆ ಅಂತಿಮ ತೀರ್ಮಾನವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆರವರಿಗೆ ಕಾಯ್ದಿರಿಸಿಕೊಂಡಿರುತ್ತದೆ.

ಅರ್ಜಿ ಸಲ್ಲಿಸುವ ವಿಧಾನ:–

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗಧಿತ ಅರ್ಜಿ ನಮೂನೆಯನ್ನು ಆಯಾ ನಗರಸಭೆಗಳಿಂದ ಪಡೆದು ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ ಅದರ ಮೇಲೆ ಸಹಿ/ಹೆಬ್ಬೆಟ್ಟಿನ ಗುರುತು ಮಾಡುವುದು ಹಾಗೂ ಅರ್ಜಿಯ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ/ಹೆಬ್ಬೆಟ್ಟಿನ ಗುರುತು ಮಾಡುವುದು. ವಯಸ್ಸು ಮತ್ತು ಕೋರಿರುವ ಮೀಸಲಾತಿ ಸಂಭಂಧಿಸಿದಂತೆ, ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರಿಗಳಿಂದ ಪಡೆದು ಅವುಗಳ ನಕಲು ಪ್ರತಿಗಳನ್ನು ಪೌರಾಯುಕ್ತರು ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು ಅಧ್ಯಕ್ಷರು ಜಿಲ್ಲಾ ಆಯ್ಕೆ ಮತ್ತು ಪೌರಕಾರ್ಮಿಕ ನೇರ ನೇಮಕಾತಿ (ವಿಶೇಷ) ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಹೆಸರಿಗೆ ಸಂಬಂಧಪಟ್ಟ ನಗರಸಭೆಗಳ ಪೌರಾಯುಕ್ತರು ರವರ ದಿನಾಂಕಃ 24/08/2026ರ ಒಳಗಾಗಿ ಕಛೇರಿ ವೇಳೆಯಲ್ಲಿ ಅರ್ಜಿಯನ್ನು ಸಲ್ಲಿಸುವುದು, ಅರ್ಜಿಯನ್ನು ಸಲ್ಲಿಸುವ ಲಕೋಟೆಯ ಮೇಲೆ ಅಭ್ಯರ್ಥಿಯು ತಾವು ಅರ್ಜಿಸಲ್ಲಿಸುವ ಹುದ್ದೆಯ ಹೆಸರನ್ನು ತಪ್ಪದೆ, ನಮೂದಿಸುವದು. ಅವಧಿ/ಸಮಯ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ. ಪೌರಾಯುಕ್ತರು ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ಸೂಕ್ತ ಶಿಫಾರಸ್ಸಿನೊಂದಿಗೆ ದಿನಾಂಕಃ 31/08/2026ರೊಳಗಾಗಿ ಮಾನ್ಯ ಜಿಲ್ಲಾಧಿಕಾರಿಗಳ ಕಛೇರಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರಿಗೆ ಪರಿಶೀಲನೆಗಾಗಿ ಸಲ್ಲಿಸುವುದು.

ಅಭ್ಯರ್ಥಿಗಳು ಅರ್ಜಿಗಳೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳುಃ–

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ (ಒಟ್ಟು 3)
2. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಶೈಕ್ಷಣಿಕ /ವಿದ್ಯಾರ್ಹತೆ ದಾಖಲೆಗಳು /ಆಧಾರ್ ಕಾರ್ಡ್/ಪಡಿತರ ಚೀಟಿ ಮತದಾರರ ಗುರುತಿನ ಚೀಟಿ (ಇಪಿಐಸಿ) ದಾಖಲೆಗಳನ್ನು ಸಲ್ಲಿಸಿವುದು.
3. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಾಲಿ ಪೌರಕಾರ್ಮಿಕರಾಗಿ ನೇರ ಪಾವತಿ/ಕ್ಷೇಮಾಭಿವೃದ್ಧಿ/ದಿನಗೂಲಿ ಆಧಾರದಲ್ಲಿ 2 ವರ್ಷಕ್ಕಿಂತ ಕಡಿಮೆ ಇಲ್ಲದೇ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರಸಭೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದಾಖಲೆಗಳು.
4. ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದಾಖಲೆಗಳನ್ನು ಪೌರಾಯುಕ್ತರು ಪಡೆದು ದೃಢೀಕರಿಸಿ ಸಲ್ಲಿಸಬೇಕು.
5. ನಗರಸಭೆಗಳಿಂದ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್,ಐ) ಮತ್ತು ಭವಿಷ್ಯ ನಿಧಿ (ಪಿ.ಎಫ್) ದಾಖಲಾತಿಗಳನ್ನು ಕಡ್ಡಾಯವಾಗಿ ಸಲ್ಲಿಸುವುದು.
6. ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ **"ಡಿ"** ಯಲ್ಲಿ ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ **"ಇ"** ಯಲ್ಲಿ ಪ್ರವರ್ಗ 2ಎ. 2ಬಿ. 3ಎ. ಮತ್ತು 3ಬಿ ಗೆ ಸಂಬಂಧಿಸಿದ ಅಭ್ಯರ್ಥಿಗಳು ನಮೂನೆ **"ಎಫ್"** ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
7. ದಿನಾಂಕ 13/05/2026ರ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಿರುವಂತೆ, ಪರಿಶಿಷ್ಟ ಜಾತಿಯ ಒಳ ಮೀಸಲಾತಿಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರದಿಂದ ಪರಿಶಿಷ್ಟ ಜಾತಿ –ಎ, ಬಿ ಮತ್ತು ಸಿ ಗೆ ಪೂರಕವಾಗಿ ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸುವುದು.
8. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ 96 ಸೇನನಿ 2005 ರ ದಿನಾಂಕ 10/08/2005 ರ ಪ್ರಕಾರ ನಿಗಧಿತ ನಮೂನೆ –2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಪೌರಾಯುಕ್ತರು ದೃಢೀಕರಿಸಿ ಸಲ್ಲಿಸಬೇಕು.
9. ಸಮತಲ ಮತ್ತು ಲಂಬ ಮೀಸಲಾತಿಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಜಾತಿ/ಆದಾಯ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

10. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ.19.11.2005 ರ ಸರ್ಕಾರದ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆಃ ಸಿಆಸುಇ 115 ಸೆನನಿ 2005 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರ ಪಡೆದು ಸಲ್ಲಿಸತಕ್ಕದ್ದು.
11. ಯೋಜನಾ ನಿರಾಶ್ರೀತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃಸಿಆಸುಇ 44 ಸೇನನಿ 2001 ರ 5 ದಿನಾಂಕ 27.07.2001 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
12. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ /ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ ಸಕ್ಷಮ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

ವಿಶೇಷ ಸೂಚನೆಗಳು/ಷರತ್ತುಗಳು:–

1. ಅರ್ಜಿಯನ್ನು ಮಾರಾಟ ಮಾಡಲಾಗುವುದಿಲ್ಲ, ಅರ್ಜಿ ನಮೂನೆಯನ್ನು ಆಯಾ ನಗರಸಭೆಗಳ ಕಛೇರಿಯಿಂದ ಪಡೆಯುವುದು.
2. ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಭರ್ತಿ ಮಾಡಿ ಅಧ್ಯಕ್ಷರು, ಪೌರಕಾರ್ಮಿಕರ ನೇರ ನೇಮಕಾತಿ (ವಿಶೇಷ) ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಹೆಸರಿನಲ್ಲಿ ಪೌರಾಯುಕ್ತರು ಆಯಾ ನಗರ ಸ್ಥಳೀಯ ಸಂಸ್ಥೆಗಳ ಮೂಲಕ ಸಲ್ಲಿಸುವುದು. ನೇರವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
3. ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳನ್ನು ಮತ್ತು ದಾಖಲೆಗಳನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದು ಲಗತ್ತಿಸಿರಬೇಕು ಮತ್ತು ಕಡ್ಡಾಯವಾಗಿ ಪೌರಾಯುಕ್ತರವರಿಂದ ದೃಢೀಕರಿಸಿರಬೇಕು.
4. ಅರ್ಜಿ ನಮೂನೆಯಲ್ಲಿ ಅಭ್ಯರ್ಥಿಯ ಖಾಯಂ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು ಒಂದು ವೇಳೆ ಅಭ್ಯರ್ಥಿಯ ವಿಳಾಸ ಬದಲಾವಣೆಯಾದಲ್ಲಿ ತಕ್ಷಣವೇ ಈ ಕಚೇರಿಗೆ ಮಾಹಿತಿ ತಿಳಿಸಬೇಕು. ತಪ್ಪಿದಲ್ಲಿ ಮುಂದಿನ ಪತ್ರ ವ್ಯವಹಾರಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು.
5. ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ-ಕಾಲಕ್ಕೆ ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತವೆ.
6. ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲಾತಿಗಳನ್ನು ಒದಗಿಸಲು ತಪ್ಪಿದಲ್ಲಿ ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.
7. ಸದರಿ ಪೌರಕಾರ್ಮಿಕರ ವೇತನವನ್ನು ಎಸ್ ಎಫ್ ಸಿ ಅನುದಾನದಡಿ ರಾಜ್ಯ ಆರ್ಥಿಕ ಆಯೋಗದ ಶಿಫಾರಸ್ಸಿನಂತೆ ಇರುವ ಅಧಿಕಾರ ಹಂಚಿಕೆಗೆ ಸೀಮಿತಗೊಳಿಸುವುದು ಹಾಗೂ ಇದಕ್ಕೆ ತಗಲುವ ಹೆಚ್ಚುವರಿ ಆರ್ಥಿಕ ಹೊರೆಯನ್ನು ಸಂಬಂಧಪಟ್ಟ ಜಿಲ್ಲೆಯ ನಗರಸಭೆಗಳ ಸ್ವಂತ ನಿಧಿಯಿಂದ ಭರಿಸತಕ್ಕದ್ದು.
8. ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿದ ನಂತರ ನೇರ ಪಾವತಿಯಡಿ ಮಂಜೂರಾದ ಹುದ್ದೆಗಳು ತಂತಾನೇ ರದ್ದಾಗುತ್ತವೆ,
9. ಪ್ರಸ್ತಾಪಿತ ಪೌರಕಾರ್ಮಿಕರ ಖಾಯಂಮಾತಿಯು ಗುತ್ತಿಗೆ ಅಥವಾ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ರಾಜ್ಯದ ಇತರೆ ವರ್ಗಗಳ ನೌಕರರ/ಸಿಬ್ಬಂದಿಗೆ ಪೂರ್ವನಿದರ್ಶನ ವಾಗತಕ್ಕದಲ್ಲ.
10. ಈ 10 ಸಂಖ್ಯಾತಿರಿಕ್ತವಾಗಿ ಸೃಜಿಸಲಾದ ಹುದ್ದೆಗಳು ಸದರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ನಿವೃತ್ತಿ / ನಿಧನ/ ವಜಾಗೊಳಿಸುವಿಕೆ/ ಗೊಳಿಸುವಿಕೆ/ ಇತರೆ ಕಾರಣಗಳಿಂದ ತೆರವಾದ ದಿನಾಂಕದಿಂದ ರದ್ದಾಗುತ್ತವೆ.
11. ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತಾವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡು ಬಂದಲ್ಲಿ ಅವನು-ಅವಳು ಸ್ವತ: ಕ್ರೀಮಿನಲ್ ವ್ಯವಹಾರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದು ಪಡಿಸಲಾಗುವುದು.

ಸ್ಥಳ: ಬೆಂಗಳೂರು ಗ್ರಾಮಾಂತರ ಜಿಲ್ಲೆ.
ದಿನಾಂಕ: 22/07/2026.

ಅಧ್ಯಕ್ಷರು,
ಪೌರಕಾರ್ಮಿಕರ ನೇರ ನೇಮಕಾತಿ (ವಿಶೇಷ)
ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು,
ಬೆಂಗಳೂರು ಗ್ರಾಮಾಂತರ ಜಿಲ್ಲೆ.

PR-56

ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಸಂಖ್ಯೆ: ಜಿನಕೋ/ಸಿ(1)/ಪೌ.ನೇ/ಸಿ.ಆರ್/52/2025-26 ದಿನಾಂಕ: 22/07/2026

–: ಅಧಿಸೂಚನೆ :–

ವಿಷಯ: ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕರ್ನಾಟಕ ಪುರಸಭೆಗಳ (ನಗರಸಭೆಗಳು, ಪುರಸಭೆಗಳು, ಪಟ್ಟಣ ಪಂಚಾಯತಿಗಳ ಪೌರ ಕಾರ್ಮಿಕರ ನೇಮಕಾತಿ) (ವಿಶೇಷ) ನಿಯಮಗಳ ರೀತ್ಯಾ ನೇರ ನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ ಯುಡಿಡಿ 176 ಜೆಇಎಲ್ 2022 (ಪಿ-2)(ಇ) ದಿನಾಂಕ 23/11/2022
2. ಸರ್ಕಾರದ ಆದೇಶ ಸಂಖ್ಯೆ ನಅಇ 139 ಎಂಎಲ್ಆರ್ 2022(ಇ) ದಿನಾಂಕ 27/09/2024.
3. ಮಾನ್ಯ ಪೌರಾಡಳಿತ ನಿರ್ದೇಶನಾಲಯದ ಪತ್ರದ ಸಂಖ್ಯೆ 155436/DAM/EST2/GRPD/31/2024 ದಿನಾಂಕ 23/10/2024.
4. ಮಾನ್ಯ ಸರ್ಕಾರದ ಆದೇಶ ಪತ್ರದ ಸಂಖ್ಯೆ ಸಿಆಸುಇ 02 ಸೆಹಿಮ 2026 ಬೆಂಗಳೂರು, ದಿನಾಂಕ 13/05/2026.

****

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವ್ಯಾಪ್ತಿಯ ಮತ್ತು ನೇಮಕಾತಿ ನಿಯಮಗಳನ್ವಯ ಮಂಜೂರಾಗಿರುವ ಹುದ್ದೆಗಳಲ್ಲಿ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳಿಗೆ ವಿಶೇಷ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖಿತ (1), (2), (3) ಮತ್ತು (4) ರನ್ವಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. ನಗರ ಸ್ಥಳೀಯ ಸಂಸ್ಥೆಗಳಲ್ಲಿ ದಿನಾಂಕ 07/08/2017ರ ಪೂರ್ವದಲ್ಲಿ ನೇಮಕಾತಿ ಹೊಂದಿ ಹಾಲಿ ಪೌರಕಾರ್ಮಿಕರಾಗಿ ನೇರ ಪಾವತಿಯ ಆಧಾರದಲ್ಲಿ 2 ವರ್ಷಕ್ಕಿಂತ ಕಡಿಮೆ ಇಲ್ಲದೇ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಅರ್ಜಿ ಸಲ್ಲಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿಯೇ ಕಾರ್ಯನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳಿಂದ ಮಾತ್ರ ಸದರಿ ಪೌರಕಾರ್ಮಿಕರ ವಿಶೇಷ ನೇಮಕಾತಿ ನಿಯಮಾವಳಿಗಳಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2. ಅಭ್ಯರ್ಥಿಗಳು ಅರ್ಜಿ ನಮೂನೆಯಲ್ಲಿ ತಿಳಿಸಿರುವ ಎಲ್ಲಾ ಮಾಹಿತಿಗಳನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು ಹಾಗೂ ಅದಕ್ಕೆ ಪೂರಕವಾದ ದಾಖಲೆಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸಿ ನಿಗಧಿತ ಅವಧಿಯೊಳಗೆ ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳ ಕಛೇರಿಯಲ್ಲಿ ಸಲ್ಲಿಸತಕ್ಕದ್ದು.

3. ಉಲ್ಲೇಖ (1) ಮತ್ತು (4) ರ ಸರ್ಕಾರದ ಅಧಿಸೂಚನೆಯಲ್ಲಿ ನಿಗಧಿಪಡಿಸಿರುವ ಷರತ್ತು ಮತ್ತು ಮಾನದಂಡಗಳಂತೆ ಆಯ್ಕೆ ಪ್ರಕ್ರಿಯೆಯನ್ನು ಜರುಗಿಸಲಾಗುವುದು.
4. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕಾಲಮಿತಿ ಹಾಗೂ ವಿಳಾಸ.

ವಿವರ	ದಿನಾಂಕ	ಅರ್ಜಿ ನಮೂನೆ /ಪಡೆಯುವ ವಿಳಾಸ
ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಪ್ರಾರಂಭಿಕ ದಿನಾಂಕ	22/07/2026	ಮೇಲ್ಕಂಡಂತೆ ಅರ್ಹರು /ಆಸಕ್ತರು ತಾವು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆ ದೊಡ್ಡಬಳ್ಳಾಪುರ / ಹೊಸಕೋಟೆ / ನೆಲಮಂಗಲ, ಪುರಸಭೆಗಳಾದ ದೇವನಹಳ್ಳಿ/ ವಿಜಯಪುರ ಮತ್ತು ಪಟ್ಟಣ ಪಂಚಾಯಿತಿ ಬಾಶೆಟ್ಟಿಹಳ್ಳಿ ಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳ ಕಛೇರಿಯಲ್ಲಿ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ನಗರ ಸ್ಥಳೀಯ ಸಂಸ್ಥೆಗಳಿಗೆ ನಿಗಧಿತ ಅವಧಿಯಲ್ಲಿ ಸಲ್ಲಿಸುವುದು.
ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ	24/08/2026	
ಅರ್ಜಿಗಳನ್ನು ಪೌರಾಯುಕ್ತರು/ಮುಖ್ಯಾಧಿಕಾರಿಗಳು ಪರಿಶೀಲಿಸಿ ಪೂರಕದಾಖಲೆಗಳೊಂದಿಗೆ ಜಿಲ್ಲಾ ನಗರಾಭಿವೃದ್ಧಿ ಕೋಶಕ್ಕೆ ಸಲ್ಲಿಸಲು ಕೊನೆಯ ದಿನಾಂಕ	31/08/2026	

5. ಖಾಲಿ ಇರುವ ನೇರ ನೇಮಕಾತಿ ಪೌರಕಾರ್ಮಿಕರ ಹುದ್ದೆಗಳಿಗೆ ಸರ್ಕಾರದಿಂದ ನಿಗಧಿಪಡಿಸಲಾದ ಖಾಲಿ ಹುದ್ದೆಗಳ ಮಾಹಿತಿ, ಮಾನದಂಡಗಳು ಹಾಗೂ ಕನಿಷ್ಠ ವಿದ್ಯಾರ್ಹತೆ.

ನಗರ ಸ್ಥಳೀಯ ಸಂಸ್ಥೆ ಹೆಸರು	ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ	ಭರ್ತಿ ಮಾಡಬೇಕಾದ ಹುದ್ದೆಗಳ ಸಂಖ್ಯೆ	ಕನಿಷ್ಠ ವಿದ್ಯಾರ್ಹತೆ/ಅರ್ಹತೆ
ನಗರಸಭೆ ದೊಡ್ಡಬಳ್ಳಾಪುರ	ಪೌರ ಕಾರ್ಮಿಕರ ಹುದ್ದೆಯ ವೇತನ ಶ್ರೇಣಿ ರೂ: 27000–46675	06	1) ಕನ್ನಡ ಭಾಷೆ ಮಾತನಾಡಲು ಗೊತ್ತಿರಬೇಕು. 2) ನಗರ ಸ್ಥಳೀಯ ಸಂಸ್ಥೆಗಳಲ್ಲಿ ದಿನಾಂಕ 07/08/2017ರ ಪೂರ್ವದಲ್ಲಿ ನೇಮಕಾತಿ ಹೊಂದಿ ಹಾಲಿ ಪೌರಕಾರ್ಮಿಕರಾಗಿ ನೇರ ಪಾವತಿಯ ಆಧಾರದಲ್ಲಿ 2 ವರ್ಷಕ್ಕಿಂತ ಕಡಿಮೆ ಇಲ್ಲದೇ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳಿಂದ ಮಾತ್ರ ಸದರಿ ಪೌರಕಾರ್ಮಿಕರ ವಿಶೇಷ ನೇಮಕಾತಿ ನಿಯಮಾವಳಿಗಳಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.
ನಗರಸಭೆ ಹೊಸಕೋಟೆ		06	
ನಗರಸಭೆ ನೆಲಮಂಗಲ		05	
ಪುರಸಭೆ ದೇವನಹಳ್ಳಿ		03	
ಪುರಸಭೆ ವಿಜಯಪುರ		03	
ಪಟ್ಟಣ ಪಂಚಾಯಿತಿ, ಬಾಶೆಟ್ಟಿಹಳ್ಳಿ		03	
ಒಟ್ಟು		26	

1) ಹುದ್ದೆಗಳ ವರ್ಗೀಕರಣ :–

4) ದೊಡ್ಡಬಳ್ಳಾಪುರ ನಗರಸಭೆಯಲ್ಲಿ ಖಾಲಿ ಇರುವ 06 ಪೌರಕಾರ್ಮಿಕ ಹುದ್ದೆಗಳ ವಿವರ.

ರೋಷ್ಟರ್ ಬಿಂದು ವರ್ಗೀಕರಣ ಪಟ್ಟಿ

ಮೀಸಲಾತಿ	ಇ	ಮ.ಅ	ಗ್ರಾ.ಅ	ಮಾ.ಸೈ	ಕಮಾಅ	ಯೋ.ನಿ.ಅ	ಅಂ.ವಿ	ತೃಲಿ	ಒಟ್ಟು
ಪ.ಜಾ	0	1	0	0	0	0	0	0	1
ಸಾ.ಅ	0	1	1	0	1	0	0	0	3
ಪ.ಪಂ	0	0	0	0	0	0	0	0	0
ಪ್ರ–1	0	1	0	0	0	0	0	0	1
ಪ್ರ–2ಎ	0	1	0	0	0	0	0	0	1
ಪ್ರ–2ಬಿ	0	0	0	0	0	0	0	0	0
ಪ್ರ–3ಎ	0	0	0	0	0	0	0	0	0
ಪ್ರ–3ಬಿ	0	0	0	0	0	0	0	0	0
ಒಟ್ಟು	0	4	1	0	1	0	0	0	6

5) ಹೊಸಕೋಟೆ ನಗರಸಭೆಯಲ್ಲಿ ಖಾಲಿ ಇರುವ 06 ಪೌರಕಾರ್ಮಿಕ ಹುದ್ದೆಗಳ ವಿವರ.

ರೋಷ್ಟರ್ ಬಿಂದು ವರ್ಗೀಕರಣ ಪಟ್ಟಿ

ಮೀಸಲಾತಿ	ಇ	ಮ.ಅ	ಗ್ರಾ.ಅ	ಮಾ.ಸೈ	ಕಮಾಅ	ಯೋ.ನಿ.ಅ	ಅಂ.ವಿ	ತೃಲಿ	ಒಟ್ಟು
ಪ.ಜಾ	0	0	1	0	0	0	0	0	1
ಸಾ.ಅ	0	1	1	0	1	0	0	0	3
ಪ.ಪಂ	0	0	0	0	0	0	0	0	0
ಪ್ರ–1	0	1	0	0	0	0	0	0	1
ಪ್ರ–2ಎ	0	0	0	0	0	0	0	0	0
ಪ್ರ–2ಬಿ	0	1	0	0	0	0	0	0	1
ಪ್ರ–3ಎ	0	0	0	0	0	0	0	0	0
ಪ್ರ–3ಬಿ	0	0	0	0	0	0	0	0	0
ಒಟ್ಟು	0	3	2	0	1	0	0	0	6

6) ನೆಲಮಂಗಲ ನಗರಸಭೆಯಲ್ಲಿ ಖಾಲಿ ಇರುವ 05 ಪೌರಕಾರ್ಮಿಕರ ಹುದ್ದೆಗಳ ವಿವರ.

ರೋಷ್ಟರ್ ಬಿಂದು ವರ್ಗೀಕರಣ ಪಟ್ಟಿ

ಮೀಸಲಾತಿ	ಇ	ಮ.ಅ	ಗ್ರಾ.ಅ	ಮಾ.ಸೈ	ಕಮಾಅ	ಯೋ.ನಿ.ಅ	ಅಂ.ವಿ	ತೃಲಿ	ಒಟ್ಟು
ಪ.ಜಾ	1	0	0	0	0	0	0	0	1
ಸಾ.ಅ	1	1	0	0	0	0	0	0	2
ಪ.ಪಂ	1	0	0	0	0	0	0	0	1
ಪ್ರ–1	1	0	0	0	0	0	0	0	1
ಪ್ರ–2ಎ	0	0	0	0	0	0	0	0	0
ಪ್ರ–2ಬಿ	0	0	0	0	0	0	0	0	0
ಪ್ರ–3ಎ	0	0	0	0	0	0	0	0	0
ಪ್ರ–3ಬಿ	0	0	0	0	0	0	0	0	0
ಒಟ್ಟು	4	1	0	0	0	0	0	0	5

7) ದೇವನಹಳ್ಳಿ ಪುರಸಭೆಯಲ್ಲಿ ಖಾಲಿ ಇರುವ 3 ಪೌರಕಾರ್ಮಿಕರ ಹುದ್ದೆಗಳ ವಿವರ.

ರೋಷ್ಟರ್ ಬಿಂದು ವರ್ಗೀಕರಣ ಪಟ್ಟಿ

ಮೀಸಲಾತಿ	ಇ	ಮ.ಅ	ಗ್ರಾ.ಅ	ಮಾ.ಸೈ	ಕಮಾಅ	ಯೋ.ನಿ.ಅ	ಅಂ.ವಿ	ತೃಲಿ	ಒಟ್ಟು
ಪ.ಜಾ	0	0	0	0	0	0	1	0	1
ಸಾ.ಅ	0	1	0	1	0	0	0	0	2
ಪ.ಪಂ	0	0	0	0	0	0	0	0	0
ಪ್ರ–1	0	0	0	0	0	0	0	0	0
ಪ್ರ–2ಎ	0	0	0	0	0	0	0	0	0
ಪ್ರ–2ಬಿ	0	0	0	0	0	0	0	0	0
ಪ್ರ–3ಎ	0	0	0	0	0	0	0	0	0
ಪ್ರ–3ಬಿ	0	0	0	0	0	0	0	0	0
ಒಟ್ಟು	0	1	0	1	0	0	1	0	3

8) ವಿಜಯಪುರ ಪುರಸಭೆಯಲ್ಲಿ ಖಾಲಿ ಇರುವ 3 ಪೌರಕಾರ್ಮಿಕರ ಹುದ್ದೆಗಳ ವಿವರ.

ರೋಷ್ಟರ್ ಬಿಂದು ವರ್ಗೀಕರಣ ಪಟ್ಟಿ

ಮೀಸಲಾತಿ	ಇ	ಮ.ಅ	ಗ್ರಾ.ಅ	ಮಾ.ಸೈ	ಕಮಾಅ	ಯೋ.ನಿ.ಅ	ಅಂ.ವಿ	ತೃಲಿ	ಒಟ್ಟು
ಪ.ಜಾ	0	0	0	0	0	0	0	0	0
ಸಾ.ಅ	0	1	1	0	0	0	0	0	2
ಪ.ಪಂ	0	0	0	0	0	0	0	0	0
ಪ್ರ–1	0	0	0	0	0	0	0	0	0
ಪ್ರ–2ಎ	0	0	0	0	0	0	0	0	0
ಪ್ರ–2ಬಿ	0	0	0	0	0	0	0	0	0
ಪ್ರ–3ಎ	1	0	0	0	0	0	0	0	1
ಪ್ರ–3ಬಿ	0	0	0	0	0	0	0	0	0
ಒಟ್ಟು	1	1	1	0	0	0	0	0	3

9) ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿಯಲ್ಲಿ ಖಾಲಿ ಇರುವ 3 ಪೌರಕಾರ್ಮಿಕರ ಹುದ್ದೆಗಳ ವಿವರ.

ರೋಷ್ಟರ್ ಬಿಂದು ವರ್ಗೀಕರಣ ಪಟ್ಟಿ

ಮೀಸಲಾತಿ	ಇ	ಮ.ಅ	ಗ್ರಾ.ಅ	ಮಾ.ಸೈ	ಕಮಾಅ	ಯೋ.ನಿ.ಅ	ಅಂ.ವಿ	ತೃಲಿ	ಒಟ್ಟು
ಪ.ಜಾ	1	0	0	0	0	0	0	0	1
ಸಾ.ಅ	1	0	0	0	0	0	0	0	1
ಪ.ಪಂ	1	0	0	0	0	0	0	0	1
ಪ್ರ–1	0	0	0	0	0	0	0	0	0
ಪ್ರ–2ಎ	0	0	0	0	0	0	0	0	0
ಪ್ರ–2ಬಿ	0	0	0	0	0	0	0	0	0
ಪ್ರ–3ಎ	0	0	0	0	0	0	0	0	0
ಪ್ರ–3ಬಿ	0	0	0	0	0	0	0	0	0
ಒಟ್ಟು	3	0	0	0	0	0	0	0	3

ನೇಮಕಾತಿ ವಿಧಾನ:–

1	ಅಭ್ಯರ್ಥಿಗಳ ಆಯ್ಕೆಯನ್ನು ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರ ನೇಮಕಾತಿಗೆ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳಿಗೆ ಕರ್ನಾಟಕ ಪುರಸಭೆಗಳ ಕಾಯ್ದೆ 1964 ಕಲಂ 323 ರಲ್ಲಿನ (ಕರ್ನಾಟಕ ಕಾಯ್ದೆ ಸಂಖ್ಯೆ 1964ರ ಸಂಖ್ಯೆ 22 ರೀತ್ಯಾ) ನೇರ ನೇಮಕಾತಿ (ವಿಶೇಷ) ನಿಯಮಗಳು 2022 ರ ಪ್ರಕಾರ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.
2	ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ನಗರಸಭೆ, ಪುರಸಭೆ,ಪಟ್ಟಣ ಪಂಚಾಯತಿಗಳಲ್ಲಿ ಹಾಲಿ ನೇರ ಪಾವತಿ ಆದಾರದಲ್ಲಿ 2 ವರ್ಷಕ್ಕಿಂತ ಕಡಿಮೆ ಇಲ್ಲದೇ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಆಧ್ಯತೆ ಅನ್ಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕರ್ತವ್ಯ ನಿರತ ಅಭ್ಯರ್ಥಿಗಳ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ ಮತ್ತು ಅಂಚೆ ಮೂಲಕ ಸ್ವೀಕೃತಿಯಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
3	ಕಡಿಮೆ ವರ್ಷ ಸೇವೆ ಸಲ್ಲಿಸಿರುವುದಕ್ಕಿಂತ ಹೆಚ್ಚು ವರ್ಷ ಸೇವೆ ಸಲ್ಲಿಸಿದವರನ್ನು ಪರಿಗಣಿಸಲಾಗುವುದು. ನೇಮಕಾತಿಯಲ್ಲಿ ಆಧ್ಯತೆಯನ್ನು ನೇರ ಪಾವತಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ಅನುಕ್ರಮವಾಗಿ ಪರಿಗಣಿಸಲಾಗುವುದು.
4	ಪೌರಕಾರ್ಮಿಕರಿಗೆ 2 ವರ್ಷಗಳ ಮೇಲ್ಪಟ್ಟು ನಗರ ಸ್ಥಳೀಯ ಸಂಸ್ಥೆಗಳಿಂದ ವೇತನ ಪಡೆದ ದಾಖಲಾತಿಗಳನ್ನು ಹಾಗೂ ಹೊರಗುತ್ತಿಗೆ ನೌಕರರಿಗೆ ಸಂಬಂಧಿಸಿದಂತೆ ಏಜೆನ್ಸಿಯಿಂದ ಪಾವತಿಸುವ ವೇತನ ಪಿ.ಎಫ್, ಇ.ಎಸ್.ಐ ದಾಖಲಾತಿಯನ್ನು ನೇಮಕಾತಿಯಲ್ಲಿ ಆಧ್ಯತೆಗೆ ಪರಿಗಣಿಸಲಾಗುವುದು.
5	ಎರಡು ಮತ್ತು ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳು ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ
6	ಅರ್ಜಿ ಸಲ್ಲಿಸುವ ವೇಳೆ ಅರ್ಜಿದಾರರ ವಯಸ್ಸು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮಗಳು ಅಥವಾ ಕರ್ನಾಟಕ ಪುರಸಭೆ (ಅಧಿಕಾರಿ/ನೌಕರರ ನೇಮಕಾತಿ) ನಿಯಮಗಳು 2010 ನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ ಸದರಿ ಅಧಿಸೂಚನೆ ಜಾರಿಗೆ ಬಂದ ದಿನಾಂಕದಿಂದ ಗರಿಷ್ಟ ವಯೋಮಿತಿ 55 ವರ್ಷ ಮೀರಬಾರದು.
7	ಅಭ್ಯರ್ಥಿಯ ವಯಸ್ಸನ್ನು ಶೈಕ್ಷಣಿಕ ವಿದ್ಯಾರ್ಹತೆ, ದಾಖಲಾತಿಗಳು/ಆಧಾರ ಕಾರ್ಡ್/ಪಡಿತರ ಚೀಟಿ/ಮತದಾರರ ಗುರುತಿನ ಚೀಟಿ (EPIC) ದಾಖಲಾತಿಗಳನ್ನು ಆಧರಿಸಿ ನಿರ್ಧರಿಸಲಾಗುವುದು.
8	ಉಪ ನಿಯಮ (2) ರಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳು ನಿಗಧಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಸದರಿ ಅಭ್ಯರ್ಥಿಗೆ ಬದಲಾಗಿ ಅದೇ ಪ್ರವರ್ಗದ ಮೀಸಲಾತಿಯಲ್ಲಿ ಹೆಚ್ಚುವರಿ ಪಟ್ಟಿಯಲ್ಲಿ ಅಭ್ಯರ್ಥಿಯಾಗಿರುವ ಮತೊಬ್ಬ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು.
9	ಉಪನಿಯಮ (2) ಮತ್ತು (5) ರಂತೆ ತಯಾರಿಸಲಾದ ಆಯ್ಕೆ ಪಟ್ಟಿಯನ್ನು ಆಯಾ ನಗರ ಸ್ಥಳೀಯ ಸಂಸ್ಥೆಯಲ್ಲಿ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು, ಆಯ್ಕೆಯಾದ ಅಭ್ಯರ್ಥಿಗಳಿಗೆ ತಿಳಿಸಿ ಮತ್ತು ಆಯ್ಕೆ ಪಟ್ಟಿಯನ್ನು ಆಯಾ ನಗರಸಭೆ/ಪುರಸಭೆ/ಪಟ್ಟಣ ಪಂಚಾಯತಿಗಳ ವೆಬ್‌ಸೈಟಿನಲ್ಲಿ ಪ್ರಚುರ ಪಡಿಸಲಾಗುವುದು.
10	ನಿಯಮ 4ರ ಉಪನಿಯಮ 6 ರಲ್ಲಿ ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದ ಮಾತ್ರಕ್ಕೆ ಅವರ ನೇಮಕಾತಿ ಹಕ್ಕು ಎಂದು ಪರಿಭಾವಿಸತಕ್ಕದ್ದಲ್ಲ. ಆಯ್ಕೆಯಾಗುವ ಅಭ್ಯರ್ಥಿಗಳು ದಾಖಲಾತಿ ಪರಿಶೀಲನೆಗೆ ಕರೆದಾಗ ಜಿಲಾಧಿಕಾರಿಗಳ ಕಛೇರಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.
11	ಅಭ್ಯರ್ಥಿಯು ಸಲ್ಲಿಸಿರುವ ದಾಖಲೆಗಳು ತಪ್ಪು ಅಥವಾ ಸುಳ್ಳು ಎಂದು ಕಂಡುಬಂದಲ್ಲಿ ನೇಮಕಾತಿ ಆದೇಶ ರದ್ದು ಪಡುವುದಲ್ಲದೇ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
12	ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದು ಪಡಿಸುವ ಅಥವಾ ಹೆಚ್ಚುವರಿ ಷರತ್ತುಗಳನ್ನು ವಿಧಿಸುವ ಬಗ್ಗೆ ಅಂತಿಮ ತೀರ್ಮಾನವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆರವರಿಗೆ ಕಾಯ್ದಿರಿಸಿಕೊಂಡಿರುತ್ತದೆ.

ಅರ್ಜಿ ಸಲ್ಲಿಸುವ ವಿಧಾನ:–

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗಧಿತ ಅರ್ಜಿ ನಮೂನೆಯನ್ನು ಆಯಾ ನಗರ ಸ್ಥಳೀಯ ಸಂಸ್ಥೆಗಳಿಂದ ಪಡೆದು ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್

ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ ಅದರ ಮೇಲೆ ಸಹಿ/ಹೆಬ್ಬೆಟ್ಟಿನ ಗುರುತು ಮಾಡುವುದು ಹಾಗೂ ಅರ್ಜಿಯ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ/ಹೆಬ್ಬೆಟ್ಟಿನ ಗುರುತು ಮಾಡುವುದು. ವಯಸ್ಸು ಮತ್ತು ಕೋರಿರುವ ಮೀಸಲಾತಿ ಸಂಭಂಧಿಸಿದಂತೆ, ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರಿಗಳಿಂದ ಪಡೆದು ಅವುಗಳ ನಕಲು ಪ್ರತಿಗಳನ್ನು ಪೌರಾಯುಕ್ತರು/ಮುಖ್ಯಾಧಿಕಾರಿಗಳಿಂದ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು ಅಧ್ಯಕ್ಷರು ಜಿಲ್ಲಾ ಆಯ್ಕೆ ಮತ್ತು ಪೌರಕಾರ್ಮಿಕ ನೇರ ನೇಮಕಾತಿ (ವಿಶೇಷ) ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಹೆಸರಿಗೆ ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು /ಮುಖ್ಯಾಧಿಕಾರಿಗಳಿಗೆ ದಿನಾಂಕಃ 24/08/2026 ಒಳಗಾಗಿ ಕಛೇರಿ ವೇಳೆಯಲ್ಲಿ ಅರ್ಜಿಯನ್ನು ಸಲ್ಲಿಸುವುದು, ಅರ್ಜಿಯನ್ನು ಸಲ್ಲಿಸುವ ಲಕೋಟೆಯ ಮೇಲೆ ಅಭ್ಯರ್ಥಿಯು ತಾವು ಅರ್ಜಿಸಲ್ಲಿಸುವ ಹುದ್ದೆಯ ಹೆಸರನ್ನು ತಪ್ಪದೆ, ನಮೂದಿಸುವದು. ಅವಧಿ/ಸಮಯ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ. ಪೌರಾಯುಕ್ತರು/ಮುಖ್ಯಾಧಿಕಾರಿಗಳು ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ಸೂಕ್ತ ಶಿಫಾರಸ್ಸಿನೊಂದಿಗೆ ದಿನಾಂಕಃ 31/08/2026ರೊಳಗಾಗಿ ಮಾನ್ಯ ಜಿಲ್ಲಾಧಿಕಾರಿಗಳ ಕಛೇರಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರಿಗೆ ಪರಿಶೀಲನೆಗಾಗಿ ಸಲ್ಲಿಸುವುದು.

ಅಭ್ಯರ್ಥಿಗಳು ಅರ್ಜಿಗಳೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳುಃ–

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ (ಒಟ್ಟು 3)
2. ಜನ್ಮ ದಿನಾಂಕದ ದೃಡೀಕರಣಕ್ಕಾಗಿ ಶೈಕ್ಷಣಿಕ /ವಿದ್ಯಾರ್ಹತೆ ದಾಖಲೆಗಳು /ಆಧಾರ್ ಕಾರ್ಡ್/ಪಡಿತರ ಚೀಟಿ ಮತದಾರರ ಗುರುತಿನ ಚೀಟಿ (ಇಪಿಐಸಿ) ದಾಖಲೆಗಳನ್ನು ಸಲ್ಲಿಸಿವುದು.
3. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಾಲಿ ಪೌರಕಾರ್ಮಿಕರಾಗಿ ನೇರ ಪಾವತಿ ಆಧಾರದಲ್ಲಿ 2 ವರ್ಷಕ್ಕಿಂತ ಕಡಿಮೆ ಇಲ್ಲದೇ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದಾಖಲೆಗಳು.
4. ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದಾಖಲೆಗಳನ್ನು ಪೌರಾಯುಕ್ತರು / ಮುಖ್ಯಾಧಿಕಾರಿಗಳಿಂದ ಪಡೆದು ದೃಡೀಕರಿಸಿ ಸಲ್ಲಿಸಬೇಕು.
5. ನಗರಸಭೆ/ಪುರಸಭೆ/ಪಟ್ಟಣ ಪಂಚಾಯತಿಯಿಂದ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್,ಐ) ಮತ್ತು ಭವಿಷ್ಯ ನಿಧಿ (ಪಿ.ಎಫ್) ದಾಖಲಾತಿಗಳನ್ನು ಕಡ್ಡಾಯವಾಗಿ ಸಲ್ಲಿಸುವುದು.
6. ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ "ಡಿ" ಯಲ್ಲಿ ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ "ಇ" ಯಲ್ಲಿ ಪ್ರವರ್ಗ 2ಎ. 2ಬಿ. 3ಎ. ಮತ್ತು 3ಬಿ ಗೆ ಸಂಬಂಧಿಸಿದ ಅಭ್ಯರ್ಥಿಗಳು ನಮೂನೆ "ಎಫ್" ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
7. ದಿನಾಂಕ 13/05/2026ರ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಿರುವಂತೆ, ಪರಿಶಿಷ್ಟ ಜಾತಿಯ ಒಳ ಮೀಸಲಾತಿಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರದಿಂದ ಪರಿಶಿಷ್ಟ ಜಾತಿ –ಎ, ಬಿ ಮತ್ತು ಸಿ ಗೆ ಪೂರಕವಾಗಿ ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸುವುದು.
8. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ 96 ಸೇನನಿ 2005 ರ ದಿನಾಂಕ 10/08/2005 ರ ಪ್ರಕಾರ ನಿಗಧಿತ ನಮೂನೆ –2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಪೌರಾಯುಕ್ತರು/ಮುಖ್ಯಾಧಿಕಾರಿಗಳಿಂದ ದೃಡೀಕರಿಸಿ ಸಲ್ಲಿಸಬೇಕು.
9. ಸಮತಲ ಮತ್ತು ಲಂಬ ಮೀಸಲಾತಿಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಜಾತಿ/ಆದಾಯ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.
10. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ.19.11.2005 ರ ಸರ್ಕಾರದ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆಃ ಸಿಆಸುಇ 115 ಸೆನನಿ 2005 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರ ಪಡೆದು ಸಲ್ಲಿಸತಕ್ಕದ್ದು.

11. ಯೋಜನಾ ನಿರಾಶ್ರೀತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃಸಿಆಸುಇ 44 ಸೇನನಿ 2001 ರ 5 ದಿನಾಂಕ 27.07.2001 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
12. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ /ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ ಸಕ್ಷಮ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

ವಿಶೇಷ ಸೂಚನೆಗಳು:–

1. ಅರ್ಜಿಯನ್ನು ಮಾರಾಟ ಮಾಡಲಾಗುವುದಿಲ್ಲ, ಅರ್ಜಿ ನಮೂನೆಯನ್ನು ಆಯಾ ನಗರಸ್ಥಳೀಯ ಸಂಸ್ಥೆಗಳ ಕಛೇರಿಯಿಂದ ಪಡೆಯುವುದು.
2. ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಭರ್ತಿ ಮಾಡಿ ಅಧ್ಯಕ್ಷರು, ಪೌರಕಾರ್ಮಿಕರ ನೇರ ನೇಮಕಾತಿ (ವಿಶೇಷ) ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಹೆಸರಿನಲ್ಲಿ ಪೌರಾಯುಕ್ತರು/ಮುಖ್ಯಾಧಿಕಾರಿಗಳು ಆಯಾ ನಗರ ಸ್ಥಳೀಯ ಸಂಸ್ಥೆಗಳ ಮೂಲಕ ಸಲ್ಲಿಸುವುದು. ನೇರವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
3. ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳನ್ನು ಮತ್ತು ದಾಖಲೆಗಳನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದು ಲಗತ್ತಿಸಿರಬೇಕು ಮತ್ತು ಕಡ್ಡಾಯವಾಗಿ ಪೌರಾಯುಕ್ತರು/ಮುಖ್ಯಾಧಿಕಾರಿಗಳು ರವರಿಂದ ದೃಢೀಕರಿಸಿರಬೇಕು.
4. ಅರ್ಜಿ ನಮೂನೆಯಲ್ಲಿ ಅಭ್ಯರ್ಥಿಯ ಖಾಯಂ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು ಒಂದು ವೇಳೆ ಅಭ್ಯರ್ಥಿಯ ವಿಳಾಸ ಬದಲಾವಣೆಯಾದಲ್ಲಿ ತಕ್ಷಣವೇ ಈ ಕಛೇರಿಗೆ ಮಾಹಿತಿ ತಿಳಿಸಬೇಕು. ತಪ್ಪಿದಲ್ಲಿ ಮುಂದಿನ ಪತ್ರ ವ್ಯವಹಾರಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು.
5. ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ–ಕಾಲಕ್ಕೆ ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತವೆ.
6. ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲಾತಿಗಳನ್ನು ಒದಗಿಸಲು ತಪ್ಪಿದಲ್ಲಿ ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.
7. ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತಾವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡು ಬಂದಲ್ಲಿ ಅವನು–ಅವಳು ಸ್ವತ: ಕ್ರೀಮಿನಲ್ ವ್ಯವಹಾರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದು ಪಡಿಸಲಾಗುವುದು.

ಸ್ಥಳ: ಬೆಂಗಳೂರು ಗ್ರಾಮಾಂತರ ಜಿಲ್ಲೆ.
ದಿನಾಂಕ: 22/07/2026.

ಅಧ್ಯಕ್ಷರು,
ಪೌರಕಾರ್ಮಿಕರ ನೇರ ನೇಮಕಾತಿ (ವಿಶೇಷ)
ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು,
ಬೆಂಗಳೂರು ಗ್ರಾಮಾಂತರ ಜಿಲ್ಲೆ.

PR-57

ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01

ಸಂಖ್ಯೆ:KPSCKA/RCT2/RCTF/9/2026/RCT-2/282360/437 ದಿನಾಂಕ:17 -07-2026

ಅಧಿಸೂಚನೆ

ಅಂತಿಮ ಆಯ್ಕೆಪಟ್ಟಿ

ಆಯೋಗದ ಅಧಿಸೂಚನೆ ಸಂಖ್ಯೆ: ಪಿಎಸ್‌ಸಿ 505 ಆರ್‌ಟಿಬಿ(2)/2023-24/3496, ದಿ:15-03-2024ರಲ್ಲಿ ಅಧಿಸೂಚಿಸಿರುವ **ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿನ ಗ್ರಂಥಪಾಲಕರು-3(ಹೈ.ಕ)** ಹುದ್ದೆಗಳ **ತಾತ್ಕಾಲಿಕ ಆಯ್ಕೆಪಟ್ಟಿಯನ್ನು** ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಮತ್ತು 2022ರ ತಿದ್ದುಪಡಿ ನಿಯಮಗಳನ್ವಯ ದಿನಾಂಕ:17-06-2026ರಂದು ಪ್ರಕಟಿಸಿ, ಸದರಿ ಆಯ್ಕೆಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲಾವಕಾಶವನ್ನು ನೀಡಲಾಗಿತ್ತು. ಈ ಸಂಬಂಧ ಯಾವುದೇ ಆಕ್ಷೇಪಣೆಗಳು ಸ್ವೀಕೃತವಾಗದ ಹಿನ್ನೆಲೆಯಲ್ಲಿ ನಿಯಮಾನುಸಾರ ಸದರಿ ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿ ಈ ಮೂಲಕ ಪ್ರಕಟಿಸಿದೆ.

ಹುದ್ದೆ : ಗ್ರಂಥಪಾಲಕರು

ನೇಮಕಾತಿ ಪ್ರಾಧಿಕಾರ : ಆಯುಕ್ತರು

ಇಲಾಖೆ : ಸಾರ್ವಜನಿಕ ಗ್ರಂಥಾಲಯ

HYDERABAD KARNATAKA

SL.NO.	NAME OF THE CANDIDATE	REGNO.	D_O_B	RESVN.	TOTMK	PERS.
		QUALIFICATION				
1	KALPANA 1/15 BLOCK NO 1 KAMTHANA KAMTHANA TQ DIST BIDAR BIDAR 585226	241247239	06/06/1986	GM/ST	138.5000	69.2500
		Bachelor of Library & Information Science				
2	HANUMANTRAYA HIRERAYAKUMPI RAICHUR 584113	241252623	20/07/1998	ST	90.0000	45.0000
		Master of Library & Information Science				
3	UMESH G W NO 32 SR HOSPITAL NEAR SAI BABA TEMPLE CANTONMENT BALLARI 583104	241257774	03/06/1993	SC	76.7500	38.3750
		Bachelor of Library & Information Science				

ಆಯೋಗದ ಆದೇಶದ ಮೇರೆಗೆ

ಸಹಿ/-

(ಕೆ. ಜ್ಯೋತಿ)

ಕಾರ್ಯದರ್ಶಿ

ಕರ್ನಾಟಕ ಲೋಕಸೇವಾ ಆಯೋಗ

PR-58

ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು-01

ಸಂಖ್ಯೆ:KPSCKA/RCT2/RCTF/25/2026/RCT-2/277188/454 ದಿನಾಂಕ:23-07-2026

ಅಧಿಸೂಚನೆ

ಅಂತಿಮ ಆಯ್ಕೆಪಟ್ಟಿ

ಆಯೋಗದ ಅಧಿಸೂಚನೆ ಸಂಖ್ಯೆ: ಪಿಎಸ್‌ಸಿ 506 ಆರ್‌ಟಿಬಿ(2)/2023-24/3497, ದಿ:15-03-2024ರಲ್ಲಿ ಅಧಿಸೂಚಿಸಿರುವ **ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿನ ಗ್ರಂಥಪಾಲಕರು-10(ಆರ್‌ಪಿಸಿ)** ಹುದ್ದೆಗಳ **ತಾತ್ಕಾಲಿಕ ಆಯ್ಕೆಪಟ್ಟಿಯನ್ನು** ಕರ್ನಾಟಕ ನಾಗರೀಕ ಸೇವಾ (ನೇರನೇಮಕಾತಿ) (ಸಾಮಾನ್ಯ) ನಿಯಮಗಳು 2021 ಮತ್ತು 2022ರ ತಿದ್ದುಪಡಿ ನಿಯಮಗಳನ್ವಯ ದಿನಾಂಕ:20-06-2026ರಂದು ಪ್ರಕಟಿಸಿ, ಸದರಿ ಆಯ್ಕೆಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲಾವಕಾಶವನ್ನು ನೀಡಲಾಗಿತ್ತು. ಈ ಸಂಬಂಧ ಸ್ವೀಕೃತವಾಗಿರುವ ಆಕ್ಷೇಪಣೆಗಳನ್ನು ಪರಿಶೀಲಿಸಿ, ನಿಯಮಾನುಸಾರ ಸದರಿ ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿ ಈ ಮೂಲಕ ಪ್ರಕಟಿಸಿದೆ.

ಹುದ್ದೆ : ಗ್ರಂಥಪಾಲಕರು

ನೇಮಕಾತಿ ಪ್ರಾಧಿಕಾರ : ಆಯುಕ್ತರು

ಇಲಾಖೆ : ಸಾರ್ವಜನಿ ಕಗ್ರಂಥಾಲಯ

RESIDUAL PARENT CADRE

SL.NO.	NAME OF THE CANDIDATE	REGNO.	D_O_B	RESVN.	TOTMK	PERS.
				QUALIFICATION		
1	MALINGARAYA DALAWAYI AT POST KANAKAL VIJAYAPURA 586203	241370338	16/04/1998	GM/2A/RL	120.2500	60.1250
			Bachelor of Library and Information Science			
2	SHWETHA C NO. 78 RIZWAN LAYOUT OPPOSITE TO SHOBHA DREAM GARDEN BELLAHALLI VILLAGE BENGALURU URBAN 560064	241397367	28/01/1994	GM/2A/W	109.2500	54.6250
			Master of Library and Information Science			
3	SAMPATH N DOOR NO 281 DASANAKOPPALU OPPOSITE ROAD OF GOVT SCHOOL BOGADHI POST JAYAPURA HOBLI MYSURU 570026	241390311	03/07/1996	GM/3A	106.2500	53.1250
			Bachelor of Library and Information Science			

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**

SL.NO.	NAME OF THE CANDIDATE	REGNO.	D_O_B	RESVN.	TOTMK	PERS.
		QUALIFICATION				
4	RAGHUNANDAN H J HOSAHALLY VILLEGE AND POST HIRISAVE HOBLI C R PATNA TALLUK HASSAN DISTRICT HASSAN 573141	241391099 Bachelor of Library and Information Science	01/12/1994	2A	105.7500	52.8750
5	MANJUNATH V DURAGANNAVAR MANJUNATH DURAGANNAVAR #6, SUPRIYA RESIDENCY 3RD FLOOR, 4TH MAIN, 2ND STAGE, VINAYAKA LAYOUT, VIJAYANAGAR, BENGALURU BENGALURU URBAN 560040	241405147 Bachelor of Library and Information Science	18/02/1993	C1	97.5000	48.7500
6	SAHANA P HEGDEKAR C/O SAHANA HOUSE 62/2 OUTHOUSE A BLOCK 1ST CROSS NEAR COMMERCIAL TAX OFFICE GOPALGOWDA EXTENSION SHIVAMOGGA CITY SHIVAMOGGA 577205	241378131 Bachelor of Library and Information Science	16/08/1997	GM/2A/W	92.5000	46.2500
7	UMESH G W NO 32 SR HOSPITAL NEAR SAI BABA TEMPLE CANTONMENT BALLARI 583104	241359797 Bachelor of Library and Information Science	03/06/1993	SC	83.0000	41.5000
8	DIVYASHREE PAWAR HOUSE NO 46/6 WARD 10, ANEGUNDI CHAWL NEAR RAILWAY STATION BAGALKOT BAGALKOT587101	241365614 Bachelor of Library and Information Science	24/12/1996	SC/W	77.5000	38.7500
9	HANUMANTRAYA HIRERAYAKUMPI RAICHUR 584113	241352343 Master of Library and Information Science	20/07/1998	ST	75.5000	37.7500

ಈ ಅಂತಿಮ ಆಯ್ಕೆ ಪಟ್ಟಿಯನ್ನು **ಮಾನ್ಯ ಉಚ್ಚ ನ್ಯಾಯಾಲಯ ಮತ್ತು ಇತರ ನ್ಯಾಯಾಲಯಗಳಲ್ಲಿ** ದಾಖಲಾಗಿರುವ ಪ್ರಕರಣ ಸಂಖ್ಯೆ:**WP NO:17968/2025, 25515/2025, 105489/2025, & A.NO:3753-58/2025** ರ ಅಂತಿಮ **ತೀರ್ಪಿಗೆ** ಒಳಪಟ್ಟಂತೆ ಪ್ರಕಟಿಸಿದೆ.

ಆಯೋಗದ ಆದೇಶದ ಮೇರೆಗೆ

ಸಹಿ/-

(ಕೆ. ಜ್ಯೋತಿ)

ಕಾರ್ಯದರ್ಶಿ

ಕರ್ನಾಟಕ ಲೋಕಸೇವಾ ಆಯೋಗ

PR-59

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-೫೬೯.

P S BASAVARAJU